**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

**DTE-ADMI0ACM2/25/2025**

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:30-06-2025.

**-:: ಸು ತ್ತೋಲೆ ::-**

**ವಿಷಯ:** 2025-26ನೇ ಸಾಲಿನಲ್ಲಿ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ **ಪ್ರಥಮ ಸೆಮಿಸ್ಟರ್ / ಲ್ಯಾಟರಲ್ ಎಂಟ್ರಿ 3ನೇ ಸೆಮಿಸ್ಟರ್ ಡಿಪ್ಲೋಮಾಗೆ / ವೃತ್ತಿಪರ ಅಭ್ಯರ್ಥಿಗಳ ಲ್ಯಾಟರಲ್ ಎಂಟ್ರಿ ಪ್ರವೇಶ ಅವಧಿಯನ್ನು ವಿಸ್ತರಿಸುವ** ಬಗ್ಗೆ.

**ಉಲ್ಲೇಖ:**
1. ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ. DTE-ADMI0ACM2/25/2025, ದಿ:05.05.2025 (ಸರ್ಕಾರಿ, ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳು).
2. ಈ ಕಛೇರಿ ಪತ್ರ ಸಂ. DTE-ADMI0ACM2/34/2025, ದಿ:29.05.2025 (ಸರ್ಕಾರಿ/ಅನುದಾನಿತ ಲ್ಯಾಟರಲ್ ಎಂಟ್ರಿ)
3. ಈ ಕಛೇರಿ ಪತ್ರ ಸಂ. DTE-ADMI0ACM2/35/2024, ದಿ:29.05.2025 (ಖಾಸಗಿ ಲ್ಯಾಟರಲ್ ಎಂಟ್ರಿ)
4. ಈ ಕಛೇರಿ ಸುತ್ತೋಲೆ ಪತ್ರ ಸಂ. DTE-ADMI0ACM2/39/2025, ದಿ:10.06.2025. (ವೃತ್ತಿಪರ ಅಭ್ಯರ್ಥಿಗಳಿಗೆ)

*********

2025-26ನೇ ಶೈಕ್ಷಣಿಕ ಸಾಲಿನ ಪ್ರಥಮ ಸೆಮಿಸ್ಟರ್ ಹಾಗೂ ಲ್ಯಾಟರಲ್ ಎಂಟ್ರಿ 3ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳ ಪ್ರವೇಶಾತಿ ಸಂಬಂಧ ದ್ವಿತೀಯ ಪಿಯುಸಿ/ ಎರಡು ಐಟಿಐ ನಲ್ಲಿ ಉತ್ತೀರ್ಣರಾಗಿರುವ ಮತ್ತು ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಹಾಗೂ ಒಂದು ವರ್ಷ ಸೇವಾನುಭವುಳ್ಳ ವೃತ್ತಿಪರ ಅಭ್ಯರ್ಥಿಗಳಿಗೂ ಸಹ ಅನ್ವಯವಾಗುವಂತೆ ಪ್ರವೇಶಾವಧಿಯನ್ನು ವಿಸ್ತರಿಸಬೇಕೆಂದು ಕೋರಿರುವುದನ್ನು ಪರಿಗಣಿಸಿ ಒಟ್ಟಾರೆ ಎಲ್ಲಾ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಪ್ರಥಮ ಸೆಮಿಸ್ಟರ್‌ನಲ್ಲಿ / ಲ್ಯಾಟರಲ್ ಎಂಟ್ರಿ 3ನೇ ಸೆಮಿಸ್ಟರ್/ವೃತ್ತಿಪರ ಲ್ಯಾಟರಲ್ ಎಂಟ್ರಿ 3ನೇ ಸೆಮಿಸ್ಟರ್‌ನಲ್ಲಿ ಭರ್ತಿ ಆಗದ ಉಳಿಕೆ ಸೀಟುಗಳಿಗೆ ***ಅಂತಿಮ ದಿ: 15.07.2025 ರವರೆಗೆ ಪ್ರವೇಶಾವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.***

ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳ ಸಂಬಂಧದಲ್ಲಿ ನಿಯಮಾನುಸಾರ ಕನಿಷ್ಠ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ. ಸದರಿ ಅಭ್ಯರ್ಥಿಗಳಿಗೆ ಪ್ರಥಮ/ತೃತೀಯ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳನ್ನು ಪ್ರಾರಂಭಿಸಲು ಸೂಕ್ತ ವ್ಯವಸ್ಥೆ ಮಾಡುವುದಲ್ಲದೆ, **ಮೇಲ್ಕಂಡ ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ತೆಗೆದುಕೊಳ್ಳುವುದರ ಮೂಲಕ ಪಠ್ಯಕ್ರಮದನ್ವಯ ನಿಗಧಿತ ಪಾಠ ಪ್ರವಚನಗಳನ್ನು ಮುಗಿಸುವಲ್ಲಿ ಕ್ರಮತೆಗೆದುಕೊಂಡು ಆಯುಕ್ತಾಲಯಕ್ಕೆ ವರದಿ ಮಾಡುವುದು.** ಪ್ರಥಮ ಡಿಪ್ಲೋಮಾ ಪ್ರವೇಶಾವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ. ಪ್ರಯುಕ್ತ, ಇದನ್ನು ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

*ಪ್ರಾಂಶುಪಾಲರು ಕೂಡಲೇ ಈ ಬಗ್ಗೆ ಕ್ರಮ ತೆಗೆದುಕೊಂಡು ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಕೋರ್ಸುಗಳಲ್ಲಿ ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. ಪ್ರಯುಕ್ತ, ಇದನ್ನು ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.*

Digitally signed by
MANJUSHREE N
Date: 03-07-2025
18:47:14

**ಆಯುಕ್ತರು**

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,**

**ಬೆಂಗಳೂರು**

ಗೆ,

| | |
|---|---|
| **ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ** - | ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ನಿಯಮಗಳ ಪ್ರಕಾರ ತಮ್ಮ ಹಂತದಲ್ಲಿಯೇ **ದಿ:15.07.2025** ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು. |

**ಪ್ರತಿ ಮಾಹಿತಿಗಾಗಿ:-**

1) ಆಯುಕ್ತರ ಆಪ್ತಶಾಖೆಗೆ.
2) ನಿರ್ದೇಶಕರ ಆಪ್ತಶಾಖೆಗೆ.
3) ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು.
4) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು,
5) ಡಿವಿಪಿ(1) ಮತ್ತು ಡಿವಿಪಿ(2) ವಿಭಾಗಕ್ಕೆ.
6) ಇ.ಆರ್.ಎಸ್ ವಿಭಾಗಕ್ಕೆ - ಸಿ.ಬಿ.ಎಸ್.ಇ, ಐ.ಸಿ.ಎಸ್.ಇ ಹಾಗೂ ಕರ್ನಾಟಕೇತರ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರ ವಿತರಿಸುವ ಬಗ್ಗೆ ಇ-ಮಾಹಿತಿ ಪುಸ್ತಕದಲ್ಲಿ ತಿಳಿಸಿರುವಂತೆ ಕ್ರಮಜರುಗಿಸತಕ್ಕದ್ದು.
7) ಇ-ಆಡಳಿತ ವಿಭಾಗಕ್ಕೆ - ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
8) ಕಡತಕ್ಕೆ.